## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 158(193) |
| ಸದಸ್ಯರ ಹೆಸರು | : | ಶ್ರೀ ಎಸ್ ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08-12-2020 |
| ಉತ್ತರಿಸುವವರು | : | ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಶ್ರೀರಂಗಪಟ್ಟಣ ಪಶ್ಚಿಮವಾಹಿನಿ ಕ್ಷೇತ್ರಕ್ಕೆ ಪ್ರತಿದಿನ ನೂರಾರು ಜನರು ಪುಣ್ಯಕಾರ್ಯ ಮತ್ತು ಅಪರ ಕರ್ಮಾಂತರಗಳನ್ನು ನಡೆಸಲು ಬರುತ್ತಿದ್ದು, ಕ್ಷೇತ್ರ, ನದಿ ದಂಡೆ, ನದಿ ಇವುಗಳಲ್ಲಿ ಸ್ವಚ್ಛತೆ ಇಲ್ಲದೆ, ತ್ಯಾಜ್ಯಗಳ ರಾಶಿ ಬಿದ್ದಿದ್ದು, ಅನೈರ್ಮಲ್ಯಕರ, ಅಶುಚಿಕರ ವಾತಾವರಣ ನಿರ್ಮಾಣವಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಶ್ರೀರಂಗಪಟ್ಟಣ ಪಶ್ಚಿಮವಾಹಿನಿ ಹಾಗೂ ಪುರಸಭೆ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ಪುರಸಭಾ ಸಿಬ್ಬಂದಿವತಿಯಿಂದ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. |
| (ಆ) | ಈ ಕ್ಷೇತ್ರಕ್ಕೆ ಕರ್ಮಾಂತರಗಳನ್ನು ನಡೆಸಲು ಬರುವವರಿಗೆ ಶುಲ್ಕ ವಿಧಿಸಲಾಗುತ್ತಿದೆಯೇ; ಎಷ್ಟು ಶುಲ್ಕ ವಿಧಿಸಲಾಗುತ್ತಿದೆ; ಇದರಿಂದ ಪುರಸಭೆಗೆ ಬರುತ್ತಿರುವ ಆದಾಯ ಎಷ್ಟು; | ಒಂದು ಪೂಜಾ ಕಾರ್ಯಕ್ಕೆ 100/-ರೂ ಶುಲ್ಕ ವಿಧಿಸಲಾಗುತ್ತಿದೆ.<br>ಹಿಂದಿನ ಆರ್ಥಿಕ ವರ್ಷಕ್ಕೆ ರೂ.1158000.00 ಸಂದಾಯವಾಗಿರುತ್ತದೆ. |
| (ಇ) | ಈ ಕ್ಷೇತ್ರದ ಸ್ವಚ್ಛತೆ ಮತ್ತು ಅಭಿವೃದ್ಧಿಗೆ ಪುರಸಭೆಯವರು ಸೂಕ್ತ ಕ್ರಮ ತೆಗೆದುಕೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ನೈರ್ಮಲ್ಯವನ್ನು ಕಾಪಾಡಲು ಕ್ರಮ ತೆಗೆದುಕೊಳ್ಳುವರೆ; ಈ ಕ್ಷೇತ್ರಕ್ಕೆ ಹೆಚ್ಚುವರಿಯಾಗಿ ಸ್ವಚ್ಛತಾ ಸಿಬ್ಬಂಧಿಯನ್ನು ನೇಮಿಸಿಕೊಂಡು ಸ್ವಚ್ಛತೆ ಕಾಪಾಡಲು ಕ್ರಮ ತೆಗೆದುಕೊಳ್ಳಲಾಗುವುದೇ? | ಕ್ಷೇತ್ರದ ಸ್ವಚ್ಛತೆಗೆ ಸಂಬಂಧಿಸಿದಂತೆ ಪುರಸಭೆ ವ್ಯಾಪ್ತಿಗೆ ಒಳಪಡುವ ಪಶ್ಚಿಮವಾಹಿನಿ ಪ್ರದೇಶ ಹಾಗೂ ನದಿ ದಂಡೆಯಲ್ಲಿ ಪ್ರತಿನಿತ್ಯ ಇಬ್ಬರು ಕಾರ್ಮಿಕರನ್ನು ನಿಯೋಜಿಸಿಕೊಂಡು ಸ್ವಚ್ಛತಾ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. ವಿಶೇಷವಾಗಿ ಅಮಾವಾಸ್ಯೆ ಮತ್ತು ಇತರೆ ಸಂದರ್ಭಗಳಂದು ಪುರಸಭೆವತಿಯಿಂದ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿಕೊಂಡು ಸ್ವಚ್ಛತಾ ಕೆಲಸವನ್ನು ಕೈಗೊಂಡು ನೈರ್ಮಲ್ಯತೆಯನ್ನು ಕಾಪಾಡಲಾಗುತ್ತಿದೆ. |

ಸಂಖ್ಯೆ: ನಅಇ 137 ಜಿಇಎಲ್ 2020(ಇ)

(ಡಾ॥ ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು